24

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕಾ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿನ 3ನೇ ತ್ರೈ ಮಾಸಿಕ ಯೋಜನಾ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:-** 1) ಸರ್ಕಾರಿ ಆದೇಶ ಸಂಖ್ಯೆ: ಕೃಇ 10 ಕೃವಿಶಿ 2013, ದಿನಾಂಕ: 04-06-2013 ಮತ್ತು 26-08-2013

2) ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ ಇವರ ದಿನಾಂಕ: 11-10-2013ರ ಪತ್ರ ಸಂಖ್ಯೆ: ಹನಿಅ/ ಕೃತೋವಿವಿಶಿ/382/2013-14.

**** *** ****

ಪ್ರಸ್ತಾವನೆ:-

ಕರ್ನಾಟಕ ಸರ್ಕಾರವು 2013-14ನೇ ಸಾಲಿನ ಆಯವ್ಯಯದಲ್ಲಿ ರೂ. 2900.00 ಲಕ್ಷಗಳ ಯೋಜನಾ ಅನುದಾನವನ್ನು (ಆಸ್ತಿಗಳ ಸೃಜನೆಗಾಗಿ) ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗಕ್ಕೆ ನಿಗದಿಪಡಿಸಿತ್ತು. ಈ ಪೈಕಿ ಸರ್ಕಾರವು ದಿನಾಂಕ: 04-06-2013ರ ಆದೇಶದಲ್ಲಿ ರೂ. 725.00 ಲಕ್ಷಗಳನ್ನು ಬಿಡುಗಡೆ ಮಾಡಿರುತ್ತದೆ. ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿನ ಪರಿಷ್ಕೃತ ಆಯವ್ಯಯದಂತೆ ಒಂದು ಮತ್ತು ಎರಡನೇ ಯೋಜನಾ ಅನುದಾನದವನ್ನು ದಿನಾಂಕ: 26-08-2013ರ ಆದೇಶದಲ್ಲಿ ಬಿಡುಗಡೆ ಮಾಡಿರುತ್ತದೆ. ಪ್ರಸ್ತುತ ಮೂರನೇ ತ್ರೈಮಾಸಿಕ ಯೋಜನೆ ಅನುದಾನದ ವಿವರಗಳನ್ನು ಈ ಕೆಳಕಂಡಂತೆ ನೀಡುತ್ತಾ,

ಅ) ಲೆಕ್ಕಶೀರ್ಷಿಕೆ 2514-80-277-05-01-101 (ಯೋಜನೆ)
ಸಹಾಯಾನುದಾನ – ವೇತನ ಅಡಿಯಲ್ಲಿ ರೂ. 250.00 ಲಕ್ಷಗಳನ್ನು ಮತ್ತು

ಆ) ಲೆಕ್ಕಶೀರ್ಷಿಕೆ 2415-80-277-05-01-102 (ಯೋಜನೆ) (ಆಸ್ತಿಗಳ ಸೃಜನೆ)
ಸಹಾಯಾನುದಾನ – ಆಸ್ತಿಗಳ ಸೃಜನೆ ಅಡಿಯಲ್ಲಿ ರೂ. 224.75 ಲಕ್ಷಗಳನ್ನು (ಈ ಲೆಕ್ಕ ಶೀರ್ಷಿಕೆ ಅಡಿಯಲ್ಲಿ ಈಗಾಗಲೇ 725.00 ಲಕ್ಷಗಳು ಬಿಡುಗಡೆಯಾಗಿರುವುದರಿಂದ ಮೂರನೇ ತ್ರೈ ಮಾಸಿಕದಲ್ಲಿ 224.75 ಲಕ್ಷಗಳು ಬಾಕಿ ಇರುತ್ತದೆ.)

ಇ) ಲೆಕ್ಕ ಶೀರ್ಷಿಕೆ 2415-80-277-05-01-103 (ಯೋಜನೆ)
ಸಹಾಯಾನುದಾನ - ಸಾಮಾನ್ಯ ಅಡಿಯಲ್ಲಿ ರೂ. 410.50 ಲಕ್ಷಗಳನ್ನು

ಒಟ್ಟು ರೂ. 250.00+224.75+410.50 = 885.25 ಲಕ್ಷಗಳನ್ನು (ಎಂಟು ನೂರ ಎಂಭತ್ತೈದು ಲಕ್ಷ ಮತ್ತು ಇಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) ಬಿಡುಗಡೆ ಮಾಡಿ ಆದೇಶ ಹೊರಡಿಸಬೇಕೆಂದು

ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ ಇವರು ಮೇಲೆ ಓದಲಾದ(2)ರ ಪತ್ರದಲ್ಲಿ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 10 ಕೃವಿಶಿ 2013, ಬೆಂಗಳೂರು, ದಿನಾಂಕ: 19-11-2013**

ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗಕ್ಕೆ 2013-14ನೇ ಸಾಲಿನ ಪರಿಷ್ಕೃತ ಆಯವ್ಯಯದಲ್ಲಿ ನಿಗದಿಯಾಗಿರುವ ಯೋಜನಾ ಲೆಕ್ಕಶೀರ್ಷಿಕೆ

ಅ) 2514-80-277-05-01-101 (ಯೋಜನೆ)
ಸಹಾಯಾನುದಾನ – ವೇತನ ಅಡಿಯಲ್ಲಿ ರೂ. 1000.00 ಲಕ್ಷಗಳ ಪೈಕಿ ರೂ. 250.00 ಲಕ್ಷಗಳು ಮತ್ತು

ಆ) 2415-80-277-05-01-102 (ಯೋಜನೆ) (ಆಸ್ತಿಗಳ ಸೃಜನೆ)
ಸಹಾಯಾನುದಾನ – ಆಸ್ತಿಗಳ ಸೃಜನೆ ಅಡಿಯಲ್ಲಿ ರೂ. 1293.00 ಲಕ್ಷಗಳ ಪೈಕಿ 224.75 ಲಕ್ಷಗಳು.

ಇ) 2415-80-277-05-01-103 (ಯೋಜನೆ)
ಸಹಾಯಾನುದಾನ - ಸಾಮಾನ್ಯ ಅಡಿಯಲ್ಲಿ ರೂ. 1642.00 ಲಕ್ಷಗಳ ಪೈಕಿ ರೂ. 410.50 ಲಕ್ಷಗಳು.

ಒಟ್ಟು ರೂ. 885.25 ಲಕ್ಷಗಳು (ಎಂಟು ನೂರ ಎಂಭತ್ತೈದು ಲಕ್ಷದ ಇಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) ಮೂರನೇ ತ್ರೈಮಾಸಿಕ ಅನುದಾನವಾಗಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

- ಪ್ರತಿ ತ್ರೈಮಾಸಿಕ ಅನುದಾನವನ್ನು ಆಯಾ ತ್ರೈಮಾಸಿಕದ ಬಳಿಕ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು.
- ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು.
- ಯೋಜನೆ ಅನುದಾನದ ಸಂಶೋಧನಾ ಬಾಬ್ತು ಬಿಡುಗಡೆ ಮಾಡಿದ ಅನುದಾನದ ಶೇಕಡ 50ರಷ್ಟನ್ನು ಸಂಶೋಧನೆ ಮತ್ತು ಅಭಿವೃದ್ಧಿ ಉದ್ದೇಶಗಳಿಗೆ ವಿನಿಯೋಗಿಸತಕ್ಕದ್ದು.
- ಸರ್ಕಾರವು ನೀಡಿದ ಸೂಚನೆ ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು.
- ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು.
- ಬಿಡುಗಡೆ ಮಾಡಲಾಗಿರುವ ಅನುದಾನವು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ.

• ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು.

2. ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ, ಇವರು ಸಲ್ಲಿಸುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಶಿವಮೊಗ್ಗ, ಇವರಿಗೆ ನೀಡಲಾಗಿದೆ.

3. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2013, ದಿನಾಂಕ: 10-05-2013 ಹಾಗೂ 16-11-2013ರಲ್ಲಿ ಆಡಳಿತಾತ್ಮಕ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರದನ್ವಯ ಈ ಆದೇಶವನ್ನು ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**(ಮಂಜುನಾಥ್ ಪಾಟೀಲ್)**
**ಸರ್ಕಾರದ ಅಧೀನ ಕಾರ್ಯದರ್ಶಿ**
**ಕೃಷಿ ಇಲಾಖೆ (ಸೇವೆಗಳು)**
**(ದೂರವಾಣಿ ಸಂಖ್ಯೆ: 080 2203 2344)**

**ಇವರಿಗೆ:-**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಪ್ರಕಟಿತ 15 ಪ್ರತಿಗಳನ್ನು ಒದಗಿಸಲು.

**ಪ್ರತಿ:-**

1. ಮಹಾಲೇಖಪಾಲರು, ಕರ್ನಾಟಕ, (ಲೆಕ್ಕಪತ್ರ/ತನಿಖೆ) ಬೆಂಗಳೂರು.
2. ವಿಶೇಷಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ.
3. ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಶಿವಮೊಗ್ಗ.
4. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
5. ಉಪ ನಿರ್ದೇಶಕರು, ನೆಟ್‌ವರ್ಕ್ ಮೇನೇಜ್‌ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
6. ಜಿಲ್ಲಾ ಖಜಾನಾಧಿಕಾರಿಗಳು, ಶಿವಮೊಗ್ಗ.
7. ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 & 5), ವಿಧಾನ ಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.